# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.70 :ರಾಜಗೋಪಾಲನಗರ

**ದಿನಾಂಕ: 26.03.2021 ರಂದು ಮಧ್ಯಾಹ್ನ 3.00 ಗಂಟೆಗೆ ಶ್ರೀಮತಿ ಕಮಲ ಹೆಚ್ ನೋಡಲ್ ಅಧಿಕಾರಿ, ವಾರ್ಡ್ 70ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀಮತಿ ಕಮಲ ಹೆಚ್ | ನೋಡಲ್ಅಧಿಕಾರಿ-ವಾರ್ಡ್ ನಂ.70 |
| 2 | ಶ್ರೀ ಹೇಮಂತ್ಕುಮಾರ್ಎಸ್ ಕೆ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 4 | ದೀಪಕ್ ಹೆಚ್.ಸಿ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ-ವಾರ್ಡ್ 70 |

## :ನಡಾವಳಿಯ ವರದಿ:

ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಹೇಮಂತ್ಕುಮಾರ್ಎಸ್ ಕೆ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತಕೋರಿದರು.

- ಶ್ರೀಮತಿ ಕಮಲ ಹೆಚ್, ನೋಡಲ್ ಅಧಿಕಾರಿರವರು ಮಾತನಾಡಿ ಒಂದು ವಾರದಿಂದ ಕೋವಿಡ್ ಸೋಂಕು ಉಲ್ಬಣಿಸಿದ್ದು, ಮಾಸ್ಕ್ ಧರಿಸುವ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸೂಚಿಸಿದರು ಹಾಗೂ ಸಾರ್ವಜನಿಕರಲ್ಲಿ ಲಸಿಕೆ ಹಾಕಿಸಿಕೊಳ್ಳುವ ಬಗ್ಗೆ ಹೆಚ್ಚಿನ ಪ್ರಚಾರ ಕೈಗೊಂಡು ಅರಿವು ಮೂಡಿಸುವಂತೆ ಸೂಚಿಸಿದರು.

- **ಸ್ವಚ್ಛತೆ ಮತ್ತು ಘನ ತ್ಯಾಜ್ಯ ನಿರ್ವಹಣೆ ಬಗ್ಗೆ:**
  - ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ಪಿಳ್ಳಪ್ಪನಕಟ್ಟೆಯಲ್ಲಿರುವ ಡಿ.ಡಬ್ಲ್ಯೂ.ಸಿ ಸೆಂಟರ್ನ್ನಲ್ಲಿ ವಿದ್ಯುತ್ ಮೀಟರ್ ಸುಟ್ಟು ಹೋಗಿದ್ದು, ಶೀಘ್ರದಲ್ಲಿ ದುರಸ್ಥಿ ಪಡಿಸುವ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಸ್ಥಳಪರಿಶೀಲಿಸಿದ್ದು, ಜಂಟಿ ಆಯುಕ್ತರಿಗೆ ಈ ಬಗ್ಗೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ ಎಂಬ ವಿಷಯವನ್ನು ಶ್ರೀಮತಿ ಕಮಲ ಹೆಚ್,ನೋಡಲ್ ಅಧಿಕಾರಿ ವಾರ್ಡ್ 70ರವರು ತಿಳಿಸಿದರು.

- ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70ರವರು ಮಾತಾನಾಡಿ ವಾರ್ಡ್ 70ರ ವ್ಯಾಪ್ತಿಯಲ್ಲಿ ದಿನಾಂಕ:01/03/2021 ರಿಂದ 15/03/2021 ರವರೆಗೆ ಮಾಸ್ಕ್ ಧರಿಸದವರಿಂದ ರೂ.500/-ಗಳ ದಂಡವನ್ನು ಸಂಗ್ರಹಿಸಲಾಗಿದೆ, ಕಸವನ್ನು ಎಲ್ಲೆಂದರಲ್ಲಿ ಸುರಿಯುವವರಿಂದ ರೂ4400/-ಗಳ ದಂಡವನ್ನು ಸಂಗ್ರಹಿಸಲಾಗಿದೆ ಹಾಗೂ ಮಾಸ್ಕ್ ಧರಿಸಲು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗಿದೆ ಎಂದು ತಿಳಿಸಿದರು.

- ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70ರವರು ಮಾತಾನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆ ಮಾಡಲು ಒಟ್ಟು 31 ಬ್ಲಾಕ್ ಗಳಿಗೆ 31 ಆಟೋಗಳನ್ನು ಒದಗಿಸಲಾಗಿರುತ್ತದೆ. ಆದರೆ ಈ ಬಗ್ಗೆ ಇತ್ತಿಚೇಗೆ ಸರ್ವೇ ನಡೆಸಿದ್ದು, ಪ್ರತಿ ಬ್ಲಾಕ್‌ಗಳಲ್ಲಿಯೂ ನಿಗದಿಗಿಂತ ಹೆಚ್ಚು ಮನೆಗಳಾಗಿರುವುದು ಕಂಡುಬಂದಿದ್ದು, ಒಟ್ಟು 33 ಬ್ಲಾಕ್‌ಗಳಾಗಿ ಮಾಡಬೇಕಾಗಿರುವುದರಿಂದ ಹೆಚ್ಚುವರಿಯಾಗಿ ಇನ್ನೂ 2 ಆಟೋಗಳು ಅತ್ಯಾವಶ್ಯಕವಾಗಿ ಬೇಕಾಗಿರುವುದರಿಂದ ಇನ್ನೂ 2 ಆಟೋಗಳನ್ನು ನೀಡುವಂತೆ ಮನವಿ ಮಾಡಿದರು
    - ಈ ಬಗ್ಗೆ ನೋಡಲ್ ಅಧಿಕಾರಿರವರು ಪ್ರತಿಕ್ರಿಯಿಸಿ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದರು.

- <u>ರಸ್ತೆ ಗುಂಡಿಗಳ ನಿರ್ವಹಣೆ ಬಗ್ಗೆ</u>

    - ಹೇಮಂತ್‌ಕುಮಾರ್ ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿ ಮಾಡಿಕೊಂಡು ವೆಟ್ ಮಿಕ್ಸ್ ಅಳವಡಿಸಲಾಗಿದೆ. ಅಂದಾಜು 280 ಟನ್‌ಗಳಷ್ಟು ಡಾಂಬರು ಮಿಕ್ಸ್ ಬೇಕಾಗಿರುತ್ತದೆ ಎಂದು ತಿಳಿಸಿದರು.

<u>BBMP SAHAYA APP:</u>

- ಹೇಮಂತ್‌ಕುಮಾರ್‌ಎಸ್.ಕೆ ಸಹಾಯಕ ಅಭಿಯಂತರರು, ವಾರ್ಡ್ ನಂ.70 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
- ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

- ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.
- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದಶ್ರೀ ಹೇಮಂತ್‌ಕುಮಾರ್ ಎಸ್ ಕೆ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ–ವಾರ್ಡ್ 70 ಹಾಗೂ
ಸಹಾಯಕ ಅಭಿಯಂತರರು,

(ಕಮಲ ಹೆಚ್)
ನೋಡಲ್ ಅಧಿಕಾರಿ ವಾರ್ಡ್–70

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರರವರ ಆದ್ಯ ಗಮನಕ್ಕೆ ತರಲಾಗಿದೆ.
2) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
9) ಕಛೇರಿ ಕಡತಕ್ಕೆ